All India Radio: Bangalore

National Bulletin Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

20.01.2025 19.35 p.m.

***************

ಮುಖ್ಯಾಂಶಗಳು

- ಪ್ರಸಕ್ತ ವರ್ಷ ಭಾರತದ ಜಿಡಿಪಿ ಶೇಕಡ 7 ರಿಂದ 8ಕ್ಕೆ ಏರಿಕೆ ಸಾಧ್ಯತೆ – ವಿಶ್ವ ಆರ್ಥಿಕ ವೇದಿಕೆಯ ಅಧ್ಯಕ್ಷ ಬೋರ್ಜ್ ಬ್ರೆಂಡೆ
- ಕೊಲ್ಕತ್ತಾದ ಆರ್.ಜಿ.ಕರ್ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ್ಯ, ಹತ್ಯೆ ಪ್ರಕರಣ; ಅಪರಾಧಿಗೆ ಜೀವಾವಧಿ ಶಿಕ್ಷೆ ವಿಧಿಸಿದ ನ್ಯಾಯಾಲಯ
- ಎರಡನೇ ಬಾರಿಗೆ ಅಮೆರಿಕಾ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಇಂದು ಪ್ರಮಾಣ ವಚನ ಸ್ವೀಕಾರ
- ಹಾಕಿ ಇಂಡಿಯಾ ಲೀಗ್; ಶ್ರಾಚಿರಾರ್ ಬೆಂಗಾಲ್ ಟೈಗರ್ಸ್-ಜೆಎಸ್‌ಡಬ್ಲ್ಯೂ ಸೂರ್ಮಾ ಹಾಕಿ ಕ್ಲಬ್ ತಂಡಗಳು ಮುಖಾಮುಖಿ

***************

ಉಪರಾಷ್ಟ್ರಪತಿ ಜಗದೀಪ್ ಧನಕರ್, ದೆಹಲಿಯ ಭಾರತೀಯ ವಿದ್ಯಾಭವನದಲ್ಲಿಂದು ನಂದಲಾಲ್ ನುವಾಲ್ ಇಂಡೋಲಜಿ ಕೇಂದ್ರಕ್ಕೆ ಶಿಲಾನ್ಯಾಸ ನೆರವೇರಿಸಿದರು.

ಬಳಿಕ ಮಾತನಾಡಿದ ಉಪರಾಷ್ಟ್ರಪತಿ, ಭಾರತೀಯ ಇತಿಹಾಸ ಮತ್ತು ಸಂಸ್ಕೃತಿಯ ಅಧ್ಯಯನವನ್ನು ನಡೆಸುವ ಇಂಡೋಲಜಿ ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. 2047ರ ವೇಳೆಗೆ ಭಾರತವನ್ನು ಅಭಿವೃದ್ಧಿಶೀಲ ರಾಷ್ಟ್ರ ನಿರ್ಮಾಣ ಮಾಡುವತ್ತ ದಾಪುಗಾಲು ಇಡಲಾಗುತ್ತಿದೆ. ಈ ಕಾರ್ಯದಲ್ಲಿ ಇಂಡೋಲಜಿ ಪ್ರಮುಖ ಕಾರ್ಯನಿರ್ವಹಣೆ ಮಾಡಬೇಕು ಎಂದು ಕರೆ ನೀಡಿದರು.

ದೇಶ ವಿರೋಧಿ ಚಟುವಟಿಕೆಗಳನ್ನು ತಟಸ್ಥಗೊಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಕೈಜೋಡಿಸಬೇಕು. ಪ್ರತಿಯೊಂದು ಹಂತದಲ್ಲಿಯೂ ದೇಶದ ಐಕ್ಯತೆ, ಅಭಿವೃದ್ಧಿ ಪರವಾದ ಧ್ವನಿ ಎತ್ತಬೇಕು ಎಂದು ತಿಳಿಸಿದರು.

ಶಾಸ್ತ್ರೀಯ ಭಾಷೆಗಳಿಗೆ ಆದ್ಯತೆ ನೀಡುವುದು ಇಂದಿನ ಅಗತ್ಯವಾಗಿದ್ದು, ನಾಗರಿಕತೆಯನ್ನು ಅರ್ಥಮಾಡಿಕೊಳ್ಳಲು ಅದಕ್ಕೆ ದೇಶೀಯ ಸ್ಪರ್ಶ ಅಗತ್ಯವಾಗಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದರು.

***************

ಭಾರತದಲ್ಲಿ ಆರ್ಥಿಕ ಸುಧಾರಣೆಗಳಿಂದಾಗಿ ಹೆಚ್ಚಿನ ಹೂಡಿಕೆಗಳ ಹಿನ್ನೆಲೆಯಲ್ಲಿ ಪ್ರಸಕ್ತ ವರ್ಷ ಶೇಕಡ 7 ರಿಂದ 8 ರಷ್ಟು ಜಿಡಿಪಿ ಬೆಳವಣಿಗೆಗಳನ್ನು ನಿರೀಕ್ಷಿಸಲಾಗಿದೆ ಎಂದು ವಿಶ್ವ ಆರ್ಥಿಕ ವೇದಿಕೆಯ ಅಧ್ಯಕ್ಷ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬೋರ್ಜ್ ಬ್ರೆಂಡೆ ತಿಳಿಸಿದ್ದಾರೆ.

ಸ್ವಿಟ್ಜರ್ಲ್ಯಾಂಡ್‌ನ ದಾವೋಸ್‌ನಲ್ಲಿ ನಡೆಯುತ್ತಿರುವ 55ನೇ ವಿಶ್ವ ಆರ್ಥಿಕ ವೇದಿಕೆಯ ವಾರ್ಷಿಕ ಸಭೆಯ ನೇಪಥ್ಯದಲ್ಲಿ ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಭಾರತ ಉತ್ತಮ ಸಾಮರ್ಥ್ಯ ಹೊಂದಿದೆ. ಹೂಡಿಕೆಗಳು, ಮೂಲಸೌಕರ್ಯ, ಶಿಕ್ಷಣ ಹಾಗೂ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಸುಧಾರಣೆಗಳನ್ನು ಕಂಡರೆ, ಭಾರತದ ಜಿಡಿಪಿ ಯಾವುದೇ ಸಂಶಯವಿಲ್ಲದೇ, ಶೇಕಡ 7 ರಿಂದ 8 ರವರೆಗೆ ಏರಿಕೆ ಕಾಣಲಿದೆ ಎಂದು ಅಭಿಪ್ರಾಯಪಟ್ಟರು.

ಧ್ವನಿ: ಬೋರ್ಜ್ ಬ್ರೆಂಡೆ

ವಿಶ್ವ ಆರ್ಥಿಕ ವೇದಿಕೆಯ ವಾರ್ಷಿಕ ಸಭೆಯಲ್ಲಿ 130ಕ್ಕೂ ಹೆಚ್ಚು ದೇಶಗಳ ಸುಮಾರು 3 ಸಾವಿರ ನಾಯಕರು ಭಾಗವಹಿಸಲಿದ್ದಾರೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್, ನಾಗರೀಕ ವಿಮಾನಯಾನ ಸಚಿವ ಕೆ.ರಾಮ್‌ಮೋಹನ್ ನಾಯ್ಡು, ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕಾ ಸಚಿವ ಚಿರಾಗ್ ಪಾಸ್ವಾನ್ ಹಾಗೂ ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಖಾತೆ ಸಹಾಯಕ ಸಚಿವ ಜಯಂತ್ ಚೌಧರಿ ಭಾರತವನ್ನು ಪ್ರತಿನಿಧಿಸಲಿದ್ದಾರೆ.

****************

ಅಖಿಲ ಭಾರತ ಶಾಸನ ಸಭೆಗಳ ಪೀಠಾಧ್ಯಕ್ಷರ 85ನೇ ಅಧಿವೇಶನಕ್ಕೆ ಬಿಹಾರದ ಪಾಟ್ನಾದಲ್ಲಿಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಅವರು, ಸಂಸತ್ತಿನ ಅಭ್ಯಾಸ ಮತ್ತು ಕಾರ್ಯವಿಧಾನದ 8ನೇ ಆವೃತ್ತಿಯ ಕೃತಿ ಬಿಡುಗಡೆ ಮಾಡಿದರು.

ಎರಡು ದಿನಗಳ ಸಮಾವೇಶದಲ್ಲಿ ರಾಜ್ಯಸಭೆ ಉಪಸಭಾಪತಿ ಹರಿವಂಶ್ ಹಾಗೂ ವಿವಿಧ ರಾಜ್ಯಗಳ ವಿಧಾನಸಭೆ ಮತ್ತು ವಿಧಾನಪರಿಷತ್ ಪೀಠಾಧ್ಯಕ್ಷರು ಭಾಗವಹಿಸಿದ್ದಾರೆ. ಕರ್ನಾಟಕ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಕೂಡ ಈ ಅಧಿವೇಶನದಲ್ಲಿ ಭಾಗವಹಿಸಿದ್ದಾರೆ.

****************

ಸಾಮಾನ್ಯ ಜನರ ಜೀವನಮಟ್ಟ ಉತ್ತಮಪಡಿಸಲು ಹಾಗೂ ಅವರ ಪ್ರಾಥಮಿಕ ಅಗತ್ಯತೆ ಪೂರೈಸಲು ಸಕಲ ಕ್ರಮ ಕೈಗೊಳ್ಳಲಾಗಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ಸಚಿವ ಡಾ. ಮನ್ಸುಖ್ ಮಾಂಡವೀಯ ಹೇಳಿದ್ದಾರೆ.

ದೆಹಲಿಯಲ್ಲಿಂದು ಅಂತಾರಾಷ್ಟ್ರೀಯ ಸಾಮಾಜಿಕ ಭದ್ರತಾ ಸಂಘಟನೆ–ISSA ಹಾಗೂ ಕಾರ್ಮಿಕರ ರಾಜ್ಯ ವಿಮಾ ನಿಗಮ–ESIC ಆಯೋಜಿಸಿದ್ದ ಎರಡು ದಿನಗಳ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ದೇಶದ 60 ಕೋಟಿ ಜನರಿಗೆ ವಿವಿಧ ಸಾಮಾಜಿಕ ಭದ್ರತೆ ಹಾಗೂ 80 ಕೋಟಿ ಜನರಿಗೆ ಆಹಾರ ಭದ್ರತೆ ಸೌಲಭ್ಯ ಒದಗಿಸಲಾಗಿದೆ ಎಂದು ತಿಳಿಸಿದರು.

ಆಯುಷ್ಮಾನ್ ಭಾರತ್ ಯೋಜನೆಯಡಿ ವಾರ್ಷಿಕ 5 ಲಕ್ಷ ರೂಪಾಯಿ ಮೌಲ್ಯದ ಚಿಕಿತ್ಸೆಯನ್ನು ಉಚಿತವಾಗಿ ನೀಡಲಾಗುತ್ತಿದೆ. ಇ–ಶ್ರಮ್ ಪೋರ್ಟಲ್‌ನಲ್ಲಿ 300ಕ್ಕಿಂತಲೂ ಹೆಚ್ಚು ಬಗೆಯ ಅಸಂಘಟಿತ ಉದ್ಯೋಗಗಳಲ್ಲಿ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಇಂತಹ ಕಾರ್ಮಿಕರಿಗೆ ಅಗತ್ಯ ಸಾಮಾಜಿಕ ಭದ್ರತೆ ಒದಗಿಸಲಾಗಿದೆ ಎಂದು ವಿವರಿಸಿದರು.

ಭಾರತದಲ್ಲಿ ಪ್ರಾಚೀನ ಕಾಲದಿಂದಲೂ ಸಾಮಾಜಿಕ ಭದ್ರತೆ ಪರಿಕಲ್ಪನೆಯಿದ್ದು, ಚಾಣಕ್ಯ ನೀತಿಯಲ್ಲೂ ಇದರ ಉಲ್ಲೇಖವಿದೆ ಎಂದು ಹೇಳಿದ ಸಚಿವರು, ಬದಲಾದ ಸಂದರ್ಭದಲ್ಲಿ ಬಡತನ ರೇಖೆಗಿಂತ ಕೆಳಗಿನ ಹಾಗೂ ಇತರ ನಾಗರಿಕರಿಗೆ ಅಗತ್ಯ ಭದ್ರತೆ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಮಿಕ ಮಂಡಳಿಯು ಶೀಘ್ರದಲ್ಲೇ ಗಿಗ್ ಕಾರ್ಮಿಕರನ್ನು ಸಾಮಾಜಿಕ ಭದ್ರತೆಯಡಿಯಲ್ಲಿ ತರಲಿದೆ ಎಂದು ಸಚಿವ ಮನ್ಸುಖ್ ಮಾಂಡವೀಯ ಮಾಹಿತಿ ನೀಡಿದರು.

ಧ್ವನಿ: ಮನ್ಸುಖ್ ಮಾಂಡವೀಯ

****************

ಆರ್.ಜಿ.ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವೈದ್ಯ ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಪ್ರಕರಣದಲ್ಲಿ ಅಪರಾಧಿಯಾಗಿರುವ ಸಂಜಯ್ ರೈಗೆ ಕೊಲ್ಕತ್ತಾದ ಸಿಲ್ಡಾ ನ್ಯಾಯಲಯ ಜೀವಾವಧಿ ಶಿಕ್ಷೆ ವಿಧಿಸಿದೆ.

ರಾಜ್ಯ ಸರ್ಕಾರವು ಸಂತ್ರಸ್ತ ಕುಟುಂಬಕ್ಕೆ 17 ಲಕ್ಷ ರೂಪಾಯಿ ಪರಿಹಾರವನ್ನು ನೀಡಬೇಕೆಂದು ನ್ಯಾಯಾಧೀಶ ಅನಿರ್ಬನ್ ದಾಸ್ ಆದೇಶಿಸಿದ್ದಾರೆ. ಕಳೆದ ಶನಿವಾರ ಸಂಜಯ್ ರೈ ತಪ್ಪಿತಸ್ಥರೆಂದು ನ್ಯಾಯಾಲಯ ಘೋಷಿಸಿತು.

ಕಳೆದ ವರ್ಷ ಆಗಸ್ಟ್ 9 ರಂದು ಆರ್.ಜಿ.ಕರ್ ವೈದ್ಯಕೀಯ ಕಾಲೇಜಿನ ಸೆಮಿನಾರ್ ಹಾಲ್‌ನಲ್ಲಿ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿನಿಯ ಮೃತದೇಹ ಪತ್ತೆಯಾಗಿತ್ತು. ಆಗಸ್ಟ್ 8 ಮತ್ತು 9 ರ ಮಧ್ಯರಾತ್ರಿ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ ಮತ್ತು ಹತ್ಯೆ ಮಾಡಲಾಗಿತ್ತು. ಆಗಸ್ಟ್ 10 ರಂದು ಕೋಲ್ಕತ್ತಾ ಪೊಲೀಸರು ಸಂಜಯ್ ರೈ ನನ್ನು ಬಂಧಿಸಿದ್ದರು. ನಂತರ ಆತನನ್ನು ಸಿಬಿಐ ಗೆ ಹಸ್ತಾಂತರಿಸಲಾಗಿತ್ತು. ಈ ಪ್ರಕರಣದಲ್ಲಿ ಸಂಜಯ್ ರೈ ವಿರುದ್ಧ ಸಿಬಿಐ, ನ್ಯಾಯಾಲಯಕ್ಕೆ ಆರೋಪ ಪಟ್ಟಿಯನ್ನು ಸಲ್ಲಿಸಿತ್ತು.

****************

ಮಹಾರಾಷ್ಟ್ರದಲ್ಲಿ ಬದ್ಲಾಪುರ ಶಾಲೆಯ ಲೈಂಗಿಕ ಹಲ್ಲೆ ಪ್ರಕರಣದ ಆರೋಪಿಯಾಗಿದ್ದ ಅಕ್ಷಯ್ ಶಿಂಧೆ ಮೇಲಿನ ನಕಲಿ ಎನ್‌ಕೌಂಟರ್‌ಗೆ ಐದು ಪೊಲೀಸರು ಹೊಣೆ ಎಂದು ಮ್ಯಾಜಿಸ್ಟ್ರೇಟ್ ತನಿಖಾ ವರದಿ ಹೇಳಿದೆ.

ಬಾಂಬೆ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ರೇವತಿ ಮೊಹಿತೆ ಡೆರೆ ಮತ್ತು ಡಾ.ನೀಲಾ ಗೋಖಲೆ ಅವರೊನ್ನೊಳಗೊಂಡ ನ್ಯಾಯಪೀಠಕ್ಕೆ ವರದಿಯನ್ನು ಸಲ್ಲಿಸಲಾಯಿತು.

ಅಕ್ಷಯ್ ಶಿಂಧೆ 2024ರ ಸೆಪ್ಟೆಂಬರ್ 23 ರಂದು ಎನ್‌ಕೌಂಟರ್‌ನಲ್ಲಿ ಮೃತಪಟ್ಟಿದ್ದರು.

ಅಕ್ಷಯ್ ಶಿಂಧೆ, ಪೊಲೀಸರ ಬಂದೂಕು ಕಿತ್ತುಕೊಂಡು, ಪೊಲೀಸರ ಮೇಲೆ ದಾಳಿ ಮಾಡಿದಾಗ, ಪ್ರತಿದಾಳಿಯಾಗಿ ಗುಂಡು ಹಾರಿಸಿ ಹತ್ಯೆ ಮಾಡಲಾಯಿತು ಎಂದು ಪೊಲೀಸರು ಹೇಳಿದ್ದಾರೆ.

ಆದರೆ ನ್ಯಾಯಾಲಯ ಇದನ್ನು ಪ್ರಶ್ನಿಸಿ, ಮ್ಯಾಜಿಸ್ಟ್ರೇಟ್ ತನಿಖೆಗೆ ಒಪ್ಪಿಸಿತ್ತು.

****************

ಅಮೆರಿಕದ 47ನೇ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಇಂದು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ವಾಷಿಂಗ್‌ಟನ್ ಡಿಸಿಯಲ್ಲಿ ಅಮೆರಿಕದ ಮುಖ್ಯ ನ್ಯಾಯಮೂರ್ತಿ ಜಾನ್ ರಾಬರ್ಟ್ಸ್ ಅವರ ಸಮ್ಮುಖದಲ್ಲಿ ನೂತನ ಅಧ್ಯಕ್ಷರ ಪ್ರಮಾಣವಚನ ನಡೆಯಲಿದೆ.

ಪ್ರಮಾಣವಚನ ಸಮಾರಂಭವು ಭಾರತೀಯ ಕಾಲಮಾನ ರಾತ್ರಿ 10.30ಕ್ಕೆ ಪ್ರಾರಂಭವಾಗಲಿದೆ. ಜೆಡಿ ವ್ಯಾನ್ಸ್, ಅಮೆರಿಕದ ಉಪಾಧ್ಯಕ್ಷರಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಹಲವಾರು ವಿದೇಶಿ ನಾಯಕರು ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಅವರು ಸಮಾರಂಭದಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಅರ್ಜೆಂಟೀನಾ ಅಧ್ಯಕ್ಷ ಜೇವಿಯರ್ ಮಿಲಿ, ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೋನಿ ಸೇರಿದಂತೆ ದೇಶ–ವಿದೇಶಗಳ ಹಲವು ಗಣ್ಯರು ಭಾಗವಹಿಸಲಿದ್ದಾರೆ.

****************

ಒಡಿಶಾದ ರೂರ್ಕೆಲಾದ ಬಿರ್ಸಾ ಮುಂಡಾ ಹಾಕಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಪುರುಷರ ಹಾಕಿ ಇಂಡಿಯಾ ಲೀಗ್ ಪಂದ್ಯದಲ್ಲಿ ಶ್ರಾಚಿರಾರ್ ಬೆಂಗಾಲ್ ಟೈಗರ್ಸ್ ತಂಡವು, ಜೆಎಸ್‌ಡಬ್ಲ್ಯೂ ಸೂರ್ಮಾ ಹಾಕಿ ಕ್ಲಬ್ ತಂಡವನ್ನು ಎದುರಿಸಲಿದ್ದು, ಪಂದ್ಯ ರಾತ್ರಿ 8.15ಕ್ಕೆ ಆರಂಭವಾಗಲಿದೆ.

****************

ಜಮ್ಮು–ಕಾಶ್ಮೀರದ ಬಾರಾಮುಲ್ಲಾ ಜಿಲ್ಲೆಯ ಸೋಪೋರ್ ಪ್ರದೇಶದ ಜಲುರಾ ಗುಜ್ಜರ್‌ಪತಿ ಕಾಡಿನಲ್ಲಿ ಭಯೋತ್ಪಾದಕರ ವಿರುದ್ಧದ ಕಾರ್ಯಾಚರಣೆಯಲ್ಲಿ ಭಾರತೀಯ ಸೇನೆಯ ಯೋಧರೊಬ್ಬರು ಹುತಾತ್ಮರಾಗಿದ್ದಾರೆ.

ಕಾಡಿನಲ್ಲಿ ಅಡಗಿರುವ ಭಯೋತ್ಪಾದಕರನ್ನು ಪತ್ತೆ ಹಚ್ಚಲು ಶೋಧ ಕಾರ್ಯ ತೀವ್ರಗೊಳಿಸಲಾಗಿದೆ. ನಿನ್ನೆ ಆರಂಭವಾದ ಕಾರ್ಯಾಚರಣೆ ಇಂದು ಕೂಡ ಮುಂದುವರೆದಿದೆ ಎಂದು ಭದ್ರತಾ ಪಡೆಗಳು ತಿಳಿಸಿವೆ.

****************

ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ–CSIR ನ ಬೃಹತ್ ನಾವೀನ್ಯತಾ ಸಂಕೀರ್ಣ ಕಟ್ಟಡವನ್ನು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಮುಂಬೈನಲ್ಲಿಂದು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಸ್ಟಾರ್ಟಪ್‌ಗಳು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ–ಎಂಎಸ್‌ಎಂಇ ವಲಯಗಳಿಗೆ ಈ ಸಂಕೀರ್ಣ ಹೆಚ್ಚಿನ ನೆರವು ನೀಡಲಿದೆ ಎಂದರು.

ಈ ಬೃಹತ್ ಸಂಕೀರ್ಣದಲ್ಲಿ 9 ಮಹಡಿಗಳಿದ್ದು, 24 ಇನ್‌ಕ್ಯುಬೇಷನ್ ಪ್ರಯೋಗಾಲಯಗಳಿವೆ. ಸುಸಜ್ಜಿತ ಕಾರ್ಯಾಲಯ ಹೊಂದಿರುವ ಈ ಕಟ್ಟಡ, ಉದ್ಯಮ ಅಭಿವೃದ್ಧಿ, ಉದ್ಯೋಗ ಸೃಷ್ಟಿ ಮತ್ತು ಪ್ರಯೋಗಶೀಲತೆಗೆ ಹೆಚ್ಚಿನ ಅವಕಾಶ ನೀಡಲಿದೆ ಎಂದು ಅವರು ಹೇಳಿದರು.

****************

ಭೂಮಿಯ ಫಲವತ್ತತೆ ಕಾಯ್ದುಕೊಳ್ಳಲು ಮತ್ತು ಸುಸ್ಥಿರ ಅಭಿವೃದ್ಧಿ ಸಾಧಿಸಲು ಪರಿಸರ ಸ್ನೇಹಿ ಕ್ರಮಗಳು ಅತ್ಯಗತ್ಯ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಖಾತೆ ಸಚಿವ ಭೂಪೇಂದ್ರ ಯಾದವ್ ಹೇಳಿದ್ದಾರೆ.

********ಮುಕ್ತಾಯ*******